ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1008
2. ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
3. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು
4. ಉತ್ತರಿಸುವ ದಿನಾಂಕ : 12.03.2020.

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು?</td><td>ರಾಜ್ಯದಲ್ಲಿ ಒಟ್ಟು 06 ಸರ್ಕಾರಿ ಹಾಗೂ 27 ಅನುದಾನಿತ ಕಾನೂನು ಕಾಲೇಜುಗಳು ಇರುತ್ತವೆ.
ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಕೆಳಕಂಡಂತಿರುತ್ತದೆ.
<table>
<tr><th></th><th>ಬೋಧಕರು</th><th>ಬೋಧಕೇತರರು</th><th>ಒಟ್ಟು</th></tr>
<tr><td>ಸರ್ಕಾರಿ ಕಾಲೇಜುಗಳು</td><td>47</td><td>13</td><td>60</td></tr>
<tr><td>ಖಾಸಗಿ ಅನುದಾನಿತ ಕಾಲೇಜುಗಳು</td><td>164</td><td>238</td><td>402</td></tr>
</table></td></tr>
<tr><td>ಆ)</td><td>ಖಾಲಿ ಇರುವ ಬೋಧಕರ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು? ಅವು ಯಾವುವು; ಯಾವಾಗಿನಿಂದ ಈ ಹುದ್ದೆಗಳು ಖಾಲಿ ಇವೆ?</td><td>ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಕೆಳಕಂಡಂತಿರುತ್ತವೆ.
<table>
<tr><th></th><th>ಬೋಧಕರು</th><th>ಬೋಧಕೇತರರು</th><th>ಒಟ್ಟು</th><th>ಯಾವಾಗಿನಿಂದ ಖಾಲಿ ಇರುತ್ತವೆ</th></tr>
<tr><td>ಸರ್ಕಾರಿ ಕಾಲೇಜುಗಳು</td><td>30</td><td>34</td><td>64</td><td>ನಿವೃತ್ತಿ, ವರ್ಗಾವಣೆ ಹಾಗೂ ಇತ್ಯಾದಿ ಕಾರಣಗಳಿಂದ 04 ವರ್ಷಗಳಿಂದ ಹುದ್ದೆಗಳು ಖಾಲಿ ಇರುತ್ತವೆ.</td></tr>
<tr><td>ಖಾಸಗಿ ಅನುದಾನಿತ ಕಾಲೇಜುಗಳು</td><td>81</td><td>156</td><td>237</td><td>ನಿವೃತ್ತಿ, ರಾಜೀನಾಮೆ, ನಿಧನ, ವರ್ಗಾವಣೆ ಹಾಗೂ ಇತ್ಯಾದಿ ಕಾರಣಗಳಿಂದ 10 ವರ್ಷಗಳಿಂದ ಹುದ್ದೆಗಳು ಖಾಲಿ ಇರುತ್ತವೆ.</td></tr>
</table></td></tr>
</table>

...2

(ಇ)	ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಯಾವ ಕಾಲಮಿತಿಯೊಳಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?	**ಸರ್ಕಾರಿ ಕಾನೂನು ಕಾಲೇಜುಗಳಿಗೆ ಸಂಬಂಧಿಸಿದಂತೆ:-** ಸರ್ಕಾರಿ ಕಾನೂನು ಕಾಲೇಜುಗಳಲ್ಲಿ **05 ಪ್ರಾಂಶುಪಾಲರ** ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳೂ ಒಳಗೊಂಡಂತೆ ಇತರೆ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು-310 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ದಿ:10.02.2020ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018ರಲ್ಲಿ ಕರಡು ನಿಯಮಗಳನ್ನು ರೂಪಿಸಿ, ಪ್ರಕಟಿಸಲಾಗಿದ್ದು, ಸದರಿ ನಿಯಮಗಳನ್ನು ಅಂತಿಮಗೊಳಿಸಿ, ಅಧಿಸೂಚನೆಯನ್ನು ಹೊರಡಿಸಿದ ನಂತರ ಖಾಲಿ ಪ್ರಾಂಶುಪಾಲರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು. ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ **24 ಸಹಾಯಕ ಪ್ರಾಧ್ಯಾಪಕರ** ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳೂ ಒಳಗೊಂಡಂತೆ ಇತರೆ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ ಒಟ್ಟು-1242 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇರ ನೇಮಕಾತಿಯಿಂದ ಭರ್ತಿ ಮಾಡಲು ದಿ:10.02.2020ರ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾಗ-3) ರಲ್ಲಿ ಕರಡು ನಿಯಮಗಳನ್ನು ಪ್ರಕಟಿಸಿ, ಹೊರಡಿಸಲಾಗಿದ್ದು, ಸದರಿ ನಿಯಮಗಳನ್ನು ಅಂತಿಮಗೊಳಿಸಿ, ಅಧಿಸೂಚನೆಯನ್ನು ಹೊರಡಿಸಿದ ನಂತರ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕಾರ್ಯಭಾರಕ್ಕನುಗುಣವಾಗಿ ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು. ಗ್ರಂಥಪಾಲಕರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಶಿಕ್ಷಣ ಇಲಾಖೆಯ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. ಸರ್ಕಾರಿ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಭರ್ತಿ ಮಾಡುವ ಕುರಿತು ಪ್ರಸ್ತಾವನೆಯು ಕರ್ನಾಟಕ ಲೋಕಸೇವಾ ಆಯೋಗದ ಪರಿಶೀಲನೆಯಲ್ಲಿರುತ್ತದೆ. **ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಿಗೆ ಸಂಬಂಧಿಸಿದಂತೆ:-** **ಸರ್ಕಾರದ ಆದೇಶ ಸಂಖ್ಯೆ:ಲಾ/77/ಕೆಎಲ್‌ಎಂ/2018 ದಿ:12.06.2019ರಲ್ಲಿ** "ಒಂದು ಬಾರಿಯ ಕ್ರಮವಾಗಿ, ರಾಜ್ಯದಲ್ಲಿನ ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿ ದಿ:31.12.2015ರೊಳಗೆ ಖಾಲಿ ಆಗಿರುವ **ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ** ನೇರ ನೇಮಕಾತಿಗಾಗಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಹೆಚ್ಚಳ ಮಾಡಲಾಗಿದೆ. ಅದರಂತೆ ಖಾಲಿಯಿರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. **ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/551/ಯುಪಿಸಿ/99, ದಿ:07.08.2003** ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು- 2003ರ ನಿಯಮ 8(2)ರನ್ವಯ ದಿನಾಂಕ:01.03.2001 ರಂದು ಖಾಲಿ ಇದ್ದ ಹಾಗೂ ನಂತರ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಟ್ಟಿರುತ್ತದೆ. ಆದ್ದರಿಂದ, ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ **ಬೋಧಕೇತರ ಹುದ್ದೆಗಳನ್ನು** ಭರ್ತಿ ಮಾಡಲು ಪ್ರಸ್ತುತ ಅವಕಾಶವಿರುವುದಿಲ್ಲ. **ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ/01/ಬಿಇಎಂ/2012, ದಿ:14.06.2012ರ** ಪ್ರಕಾರ ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿದ್ದು, ಅದೇ ರೀತಿ ಒಟ್ಟು 19 ಕಾನೂನು ಕಾಲೇಜಿನ ಬೋಧಕ-ಬೋಧಕೇತರ ಹುದ್ದೆಗಳನ್ನು 2015ರ ಸರ್ಕಾರದ ಆದೇಶದಲ್ಲಿ ವೇತನಾನುದಾನಕ್ಕೆ ಒಳಪಡಿಸಿದ್ದು, ಸದರಿ ಆದೇಶದಲ್ಲಿ ಗುರುತಿಸಿರುವ **ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು** ಸಹ ಭರ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಲಾ–ಹೆಚ್‌ಆರ್‌ಎಮ್/33/ 2020

(ಜೆ.ಸಿ. ಮಾಧುಸ್ವಾಮಿ)
ಕಾನೂನು, ಸಂಸದೀಯ ವ್ಯವಹಾರಗಳು,ಶಾಸನ ರಚನೆ
ಹಾಗೂ ಸಣ್ಣ ನೀರಾವರಿ ಸಚಿವರು